ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1258
ಸದಸ್ಯರ ಹೆಸರು	:	ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು	:	ಕಂದಾಯ ಸಚಿವರು
ಉತ್ತರಿಸುವ ದಿನಾಂಕ	:	17.03.2021

ಕ್ರ. ಸಂ.	ಪ್ರಶ್ನೆ	ಉತ್ತರ
ಅ.	ಭೂ ಪರಿವರ್ತನೆಯಾದ ಸ್ಥಳಗಳ ವಿವರಗಳನ್ನು ಹತ್ತಾರು ವರ್ಷ ಕಳೆದರೂ ಇನ್ನೂ ಪಹಣಿಯಲ್ಲಿ ದಾಖಲಿಸದಿರುವುದರಿಂದಾಗಿ ಕೆಲವರು ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ, ಶೂನ್ಯ ಬಡ್ಡಿ ಸಾಲದಂತಹ ಯೋಜನೆಗಳ ಸವಲತ್ತುಗಳನ್ನು ಪಡೆಯುತ್ತಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; (ಸಂಪೂರ್ಣ ಮಾಹಿತಿ ಒದಗಿಸುವುದು)	ಪಹಣಿಯಲ್ಲಿ ದಾಖಲಿಸದಿರುವುದರಿಂದಾಗಿ ಕೆಲವರು ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ, ಶೂನ್ಯ ಬಡ್ಡಿ ಸಾಲದಂತಹ ಯೋಜನೆಯ ಸವಲತ್ತು ಪಡೆಯುವ ಪ್ರಕರಣಗಳು ವರದಿಯಾದಲ್ಲಿ ಪರಿಶೀಲಿಸಿ ಕ್ರಮವಹಿಸಲಾಗುವುದು.
ಆ.	ಕೃಷಿ ಜಾಗವನ್ನು ವಾಸ್ತವ್ಯ, ವಾಣಿಜ್ಯ ಮತ್ತು ಕೈಗಾರಿಕಾ ಉದ್ದೇಶಗಳಿಗಾಗಿ ಭೂ ಪರಿವರ್ತನೆ ಮಾಡಿದ ಸಂದರ್ಭದಲ್ಲಿ ಕಂದಾಯ ಇಲಾಖೆಯಿಂದ ಮಾಹಿತಿಯನ್ನು ಗ್ರಾಮ ಪಂಚಾಯತ್ ಗಳಿಗೆ ನೀಡದೇ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಭೂ ಪರಿವರ್ತನೆಯಾದ ಎಲ್ಲಾ ಜಾಗಗಳಿಗೆ ಭೂ ತೆರಿಗೆಯನ್ನು ವಿಧಿಸಲು ಸಾಧ್ಯವಾಗದಿರುವುದು ನಿಜವೇ;	ನಿಜ.
ಇ.	ಸರ್ಕಾರಕ್ಕೆ ವರ್ಷಂಪ್ರತಿ ಲಕ್ಷಾಂತರ ರೂ. ತೆರಿಗೆ ನಷ್ಟವಾಗುತ್ತಿದ್ದು, ಈ ಬಗ್ಗೆ ಸರ್ಕಾರವು ಕೈಗೊಂಡ ಕ್ರಮಗಳೇನು (ಸಂಪೂರ್ಣ ವಿವರ ನೀಡುವುದು)	ಸರ್ಕಾರಕ್ಕೆ ತೆರಿಗೆ ನಷ್ಟ ಉಂಟಾಗುವ ಭೂ ಪರಿವರ್ತನಾ ಪ್ರಕರಣಗಳು ಕಂಡುಬಂದಲ್ಲಿ ಪರಿಶೀಲಿಸಿ ಕ್ರಮವಹಿಸಲಾಗುವುದು.

ಸಂಖ್ಯೆ:ಆರ್‌ಡಿ 59 ಟಿಆರ್‌ಎಂ 2020

(ಆರ್. ಅಶೋಕ)
ಕಂದಾಯ ಸಚಿವರು